ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ
ಮುಕ್ತಗಂಗೋತ್ರಿ, ಮೈಸೂರು – 570 006.
ಆಡಳಿತ ವಿಭಾಗ

# ಕಛೇರಿ ಆದೇಶ

ವಿಷಯ: ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ–2013ರ ಅಡಿ "She Box Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ನೋಡಲ್ ಅಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು, ಇವರ ಸುತ್ತೋಲೆ ಸಂಖ್ಯೆ:ಮಮಇ 55 ಕೆ.ಎಸ್.ಡಬ್ಲ್ಯೂ 2024 ದಿನಾಂಕ: 13/09/2024.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ:ಇಡಿ 28 ವಿವಿಧ 2025 ದಿನಾಂಕ: 01/02/2025.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 21/02/2025.

* * * * *

ಪ್ರಸ್ತಾವನೆ:

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ, ನವ ದೆಹಲಿ, ಇವರು ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ–2013ರ ಅಡಿ "She Box Portal" ಅನ್ನು ಹೊಸದಾಗಿ ಉನ್ನತೀಕರಿಸಿ ಅನುಷ್ಠಾನಗೊಳಿಸಿದ್ದು ಅದನ್ನು ದೇಶಾದ್ಯಂತ ಜಾರಿಗೆ ತರಲಾಗುತ್ತಿದೆ. ಈ ನಿಟ್ಟಿನಲ್ಲಿ ಆದ್ಯತೆಯ ಮೇರೆಗೆ ಕರ್ನಾಟಕ ರಾಜ್ಯದಲ್ಲೂ ಕೂಡ "She Box Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿ ಸದರಿ ನೋಡಲ್ ಅಧಿಕಾರಿಗಳ ವಿವರಗಳನ್ನು ಪೋರ್ಟಲ್‌ನಲ್ಲಿ ಅಪ್ ಲೋಡ್ ಮಾಡಬೇಕಾಗಿರುವುದು ಕಡ್ಡಾಯವಾಗಿರುತ್ತದೆ ಎಂದು ಉಲ್ಲೇಖಿತ 1ರ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಮುಂದುವರೆದು, ಉಲ್ಲೇಖಿತ 2ರ ಪತ್ರದಲ್ಲಿ ರಾಜ್ಯದ ಉನ್ನತ ಶಿಕ್ಷಣ ಇಲಾಖೆಗಳು ಹಾಗೂ ಅಧೀನ ಕಛೇರಿಗಳಲ್ಲಿಯೂ ಕೂಡ "She Box Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ಸೂಕ್ತ ಅಧಿಕಾರಿಯೊಬ್ಬರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಿ ಸದರಿ ನೋಡಲ್ ಅಧಿಕಾರಿಗಳ ವಿವರಗಳನ್ನು ನಿಗದಿತ ನಮೂನೆಯಲ್ಲಿ ಭರ್ತಿಮಾಡಿ ಒದಗಿಸುವಂತೆ ಕೋರಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ವಿಶ್ವವಿದ್ಯಾನಿಲಯದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ–2013ರ ಅಡಿ "She Box Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ನೋಡಲ್ ಅಧಿಕಾರಿಯನ್ನಾಗಿ **ಡಾ. ಎಂ. ಎಸ್. ಹೇಮಲತಾ, ಸಹ ಪ್ರಾಧ್ಯಾಪಕರು, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ಮತ್ತು ಸಂಶೋಧನ ವಿಭಾಗ,** ಇವರನ್ನು ನೇಮಿಸಲು ಮಾನ್ಯ ಕುಲಪತಿಗಳು ಅನುಮೋದನೆ ನೀಡಿರುವುದರಿಂದ ಈ ಆದೇಶ ಹೊರಡಿಸಲಾಗಿದೆ.

**ಕಛೇರಿ ಆದೇಶ ಸಂಖ್ಯೆ: ಕರಾಮುವಿ/ಆವಿ/ಜಿಎಲ್–04/SBP/2024–25, ದಿನಾಂಕ: 01/03/2025.**

ಮೇಲಿನ ಪ್ರಸ್ತಾವನೆಗೊಳಪಟ್ಟು, ಮಾನ್ಯ ಕುಲಪತಿಗಳು ಅನುಮೋದನೆ ನೀಡಿರುವುದರಿಂದ **ಡಾ. ಎಂ. ಎಸ್. ಹೇಮಲತಾ, ಸಹ ಪ್ರಾಧ್ಯಾಪಕರು, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ಮತ್ತು ಸಂಶೋಧನ ವಿಭಾಗ,** ಇವರನ್ನು ವಿಭಾಗದ ನಿರ್ವಹಣೆಯ ಜೊತೆಗೆ ಹೆಚ್ಚುವರಿಯಾಗಿ "She Box Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶ ಹೊರಡಿಸಲಾಗಿದೆ. ಕೂಡಲೇ ಕುಲಸಚಿವರಲ್ಲಿ ಕರ್ತವ್ಯದ ಮೇಲೆ ವರದಿ ಮಾಡಿಕೊಂಡು ಕಾರ್ಯ ಪ್ರವೃತ್ತರಾಗಲು ಸೂಚಿಸಿದೆ.

**ಕುಲಸಚಿವ**

**ಗೆ,**

**ಡಾ. ಎಂ. ಎಸ್. ಹೇಮಲತಾ, ಸಹ ಪ್ರಾಧ್ಯಾಪಕರು, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ಮತ್ತು ಸಂಶೋಧನ ವಿಭಾಗ, ಕರಾಮುವಿ, ಮೈಸೂರು.**

**ಪ್ರತಿ,**

1. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ಕರಾಮುವಿ, ಮೈಸೂರು.
2. ಕುಲಸಚಿವರ ಆಪ್ತ ಸಹಾಯಕರು, ಕರಾಮುವಿ, ಮೈಸೂರು.
3. ಡಾ. ನವೀನ್ ಕುಮಾರ್ ಸಿ.ಜಿ, ನೋಡಲ್ ಆಫೀಸರ್, ವೆಬ್‌ಸೈಟ್, ಕರಾಮುವಿ, ಮೈಸೂರು, ಇವರಿಗೆ ಈ ಕಛೇರಿ ಆದೇಶವನ್ನು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.